# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 119 |
| ಸದಸ್ಯರ ಹೆಸರು | ಶ್ರೀ ಕೇಶವ ಪ್ರಸಾದ್ ಎಸ್.<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 13.02.2024 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರಗಳು |
|---|---|---|
| ಅ) | ರಾಜ್ಯದಲ್ಲಿ ಅಕ್ರಮವಾಗಿ ಮರಳು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಕ್ರಮ ಮರಳು ಗಣಿಗಾರಿಕೆ ನಡೆಯುತ್ತಿರುವ ಜಿಲ್ಲೆಗಳು ಯಾವುವು; | ಬಂದಿರುತ್ತದೆ.<br>ರಾಜ್ಯದ ಮೈಸೂರು, ಚಿತ್ರದುರ್ಗ, ಶಿವಮೊಗ್ಗ, ಮಂಡ್ಯ, ಹಾಸನ, ದಕ್ಷಿಣ ಕನ್ನಡ, ಉಡುಪಿ, ಕೊಡಗು, ಚಿಕ್ಕಮಗಳೂರು, ಕಲಬುರಗಿ, ರಾಯಚೂರು, ಬೀದರ್, ವಿಜಯನಗರ, ಯಾದಗಿರಿ, ಕೊಪ್ಪಳ, ಹಾವೇರಿ, ಬಾಗಲಕೋಟೆ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಪ್ರಕರಣಗಳು ಕಂಡು ಬಂದಿರುತ್ತವೆ. |
| ಆ) | ಕಳೆದ ಒಂದು ವರ್ಷದಿಂದ ಅಕ್ರಮ ಮರಳು ಗಣಿಗಾರಿಕೆ ನಡೆಸುತ್ತಿದ್ದ ಆರೋಪದ ಮೇಲೆ ಎಷ್ಟು ಜನರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ; | ಕಳೆದ ಒಂದು ವರ್ಷದಲ್ಲಿ ಅಕ್ರಮ ಮರಳು ಗಣಿಗಾರಿಕೆ ಸಂಬಂಧ ರಾಜ್ಯಾದ್ಯಂತ ಒಟ್ಟು 239 ಪ್ರಕರಣಗಳನ್ನು ಪತ್ತೆ ಹಚ್ಚಿದ್ದು ಈ ಪೈಕಿ 63 ಪ್ರಕರಣಗಳಿಗೆ ಸಂಬಂಧಿಸಿದಂತೆ ಪೋಲೀಸ್ ಠಾಣೆ/ ನ್ಯಾಯಾಲಯ ಗಳಲ್ಲಿ ಮೊಕದ್ದಮೆಗಳನ್ನು ದಾಖಲಿಸಲಾಗಿರುತ್ತದೆ. 176 ಪ್ರಕರಣಗಳಲ್ಲಿ ಒಟ್ಟು ₹92.43 ಲಕ್ಷಗಳ ದಂಡವನ್ನು ವಿಧಿಸಿ ಸಂಗ್ರಹಿಸಲಾಗಿರುತ್ತದೆ.<br>ಅನಧಿಕೃತ ಮರಳು ಗಣಿಗಾರಿಕೆಯಡಿ ಕೈಗೊಂಡ ಕ್ರಮದ ವಿವರಗಳನ್ನು **ಅನುಬಂಧ**ದಲ್ಲಿ ನೀಡಲಾಗಿದೆ. |
| ಇ) | ಅಕ್ರಮವಾಗಿ ನೆರೆ ರಾಜ್ಯಗಳಿಗೆ ಮರಳು ರವಾನೆಯಾಗುತ್ತಿರು ವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಕ್ರಮ ಮರಳು ಗಣಿಗಾರಿಕೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ➢ ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2023 ರ ನಿಯಮ 31-R(21) ರಂತೆ ಅಂತರ್‌ರಾಜ್ಯ ಮರಳು ಸಾಗಾಣಿಕೆಯನ್ನು ನಿರ್ಬಂಧಿಸಿರುತ್ತದೆ.<br>➢ ಕಳೆದ ಒಂದು ವರ್ಷದಲ್ಲಿ ಅಕ್ರಮವಾಗಿ ನೆರೆಯ ರಾಜ್ಯಗಳಿಗೆ ಮರಳು ರವಾನೆಯಾಗುತ್ತಿರುವ ಪ್ರಕರಣಗಳು ಕಂಡುಬಂದಿರುವುದಿಲ್ಲ.<br>➢ ರಾಜ್ಯದಲ್ಲಿ ಅನಧಿಕೃತ ಮರಳು ಗಣಿಗಾರಿಕೆಯನ್ನು ತಡೆಗಟ್ಟಲು ಸರ್ಕಾರವು ಈ ಕೆಳಕಂಡಂತೆ ಕ್ರಮ ಕೈಗೊಂಡಿರುತ್ತದೆ. |

| | | |
|---|---|---|
| | | • ದಿನಾಂಕ 01.12.2021 ರಂದು ಕರ್ನಾಟಕ ಉಪಖನಿಜ (ತಿದ್ದುಪಡಿ) ರಿಯಾಯಿತಿ ನಿಯಮಗಳು, 2021 ನ್ನು ಜಾರಿಗೆ ತಂದಿರುತ್ತದೆ.<br>• ಸದರಿ ನಿಯಮಗಳಲ್ಲಿ ಅನಧಿಕೃತ ಮರಳು ಗಣಿಗಾರಿಕೆ, ದಾಸ್ತಾನು, ಸಾಗಾಣಿಕೆಯನ್ನು ತಡೆಗಟ್ಟಲು ಜಿಲ್ಲಾಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿರುತ್ತದೆ.<br>• ಮೇಲ್ಕಂಡ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ.<br>• ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಯಲು ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957ರ ಕಲಂ 4(1), 4(1-A) ಮತ್ತು ಕಲಂ 21 ಮತ್ತು 22ರಡಿ ಹಾಗೂ ಕರ್ನಾಟಕ ಉಪಖನಿಜ (ತಿದ್ದುಪಡಿ) ರಿಯಾಯಿತಿ ನಿಯಮಗಳು, 1994ರ ನಿಯಮ 31-R(12) ರಡಿ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆಗಳನ್ನು ದಾಖಲಿಸಲು ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.<br>• ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯಲ್ಲಿ ಸಂಗ್ರಹವಾಗುವ ಒಟ್ಟು ಮೊತ್ತದಲ್ಲಿ ಆಡಳಿತಾತ್ಮಕ ವೆಚ್ಚಕ್ಕಾಗಿ ಮೀಸಲಿರಿಸಿರುವ ಶೇ. 4 ರಷ್ಟು ಮೊತ್ತವನ್ನು ಅನಧಿಕೃತ ಮರಳು ಗಣಿಗಾರಿಕೆ, ದಾಸ್ತಾನು ಮತ್ತು ಸಾಗಾಣಿಕೆಯನ್ನು ನಿಯಂತ್ರಿಸುವ ಸಂಬಂಧ ತನಿಖಾ ಠಾಣೆಗಳನ್ನು ಸ್ಥಾಪಿಸಲು, ಗೃಹ ರಕ್ಷಕ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳಲು ಹಾಗೂ ಇನ್ನಿತರ ಖರ್ಚು ವೆಚ್ಚಗಳಿಗೆ ಸಂಬಂಧಪಟ್ಟಂತೆ ಬಳಸಿಕೊಳ್ಳಲು ನಿಯಮಾವಳಿಗಳಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ.<br>• ಆಯಾ ಜಿಲ್ಲಾ ವ್ಯಾಪ್ತಿಯಲ್ಲಿ ಜಿಲ್ಲಾ ಹಾಗೂ ಮರಳು ಸಮಿತಿಯಿಂದ ಚಾಲಿತದಳ ತಂಡವನ್ನು ರಚಿಸಿಕೊಂಡು ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ವಹಿಸಲಾಗುತ್ತಿದೆ.<br>• ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು "ಖನಿಜ ಸಂರಕ್ಷಣಾ ಪಡೆ" ಯನ್ನು ಸ್ಥಾಪಿಸಲು ಕ್ರಮ ವಹಿಸಲಾಗುತ್ತಿದೆ.<br>• ಅದರಂತೆ, ರಾಜ್ಯದಲ್ಲಿ ಕಳೆದ 03 ವರ್ಷಗಳಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳ ವಿರುದ್ಧ ಕೈಗೊಂಡಿರುವ ಕ್ರಮದ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |

. . . 3

| | | |
|---|---|---|
| ಈ) | ಅಕ್ರಮ ಮರಳು ಗಣಿಗಾರಿಕೆ ಮತ್ತು ಸಾಗಾಣಿ ಎಗ್ಗಿಲ್ಲದೆ ನಡೆಯುತ್ತಿದ್ದರೂ ಸೂಕ್ತ ಕ್ರಮಕೈಗೊಳ್ಳದ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? | ಅಕ್ರಮ ಮರಳು ಗಣಿಗಾರಿಕೆ ಮತ್ತು ಸಾಗಾಣಿಕೆ ವಿರುದ್ಧ ಕ್ರಮ ಕೈಗೊಳ್ಳದ ಅಧಿಕಾರಿಗಳ ವಿರುದ್ಧ ಇಲಾಖೆಯಿಂದ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.<br>ಪ್ರಸ್ತುತ, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಕಳೆದ 03 ವರ್ಷಗಳಲ್ಲಿ ಅಕ್ರಮ ಮರಳು ಗಣಿಗಾರಿಕೆ ತಡೆಗಟ್ಟಲು ವಿಫಲವಾಗಿರುವ 05 ಅಧಿಕಾರಿಗಳ ವಿರುದ್ಧ ದೂರುಗಳು ದಾಖಲಾಗಿದ್ದು ಈ ಪೈಕಿ 03 ಅಧಿಕಾರಿಗಳ ವಿರುದ್ಧ ಮಾನ್ಯ ಕರ್ನಾಟಕ ಲೋಕಾಯುಕ್ತ ವಿಚಾರಣೆಗೆ ಸರ್ಕಾರದಿಂದ ವಹಿಸಿ ಆದೇಶಿಸಲಾಗಿರುತ್ತದೆ. ಒಬ್ಬ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆಗೆ ವಹಿಸಲಾಗಿರುತ್ತದೆ. ಒಬ್ಬರು ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆ ಪ್ರಾರಂಭಿಸಿ, ದೋಷಾರೋಪಣೆ ಪಟ್ಟಿ ಜಾರಿ ಮಾಡಲಾಗಿರುತ್ತದೆ. |

ಸಂಖ್ಯೆ: ಸಿಐ-ಎಂಎಂಎನ್/44/2024

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂ ವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.

ಅನುಬಂಧ

| ವರ್ಷ | ಅನಧಿಕೃತ ಮರಳು ಗಣಿಗಾರಿಕೆ | | | ಅನಧಿಕೃತ ಮರಳು ಸಾಗಾಣಿಕೆ | | | ಅನಧಿಕೃತ ಮರಳು ದಾಸ್ತಾನು | | |
|---|---|---|---|---|---|---|---|---|---|
| | ಪತ್ತೆ ಹಚ್ಚಿದ ಪ್ರಕರಣಗಳು | ವಿಧಿಸಿರುವ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿದ ಮೊಕದ್ದಮೆಗಳು | ಪತ್ತೆ ಹಚ್ಚಿದ ಪ್ರಕರಣಗಳು | ವಿಧಿಸಿರುವ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿದ ಮೊಕದ್ದಮೆ ಗಳು | ಪತ್ತೆ ಹಚ್ಚಿದ ಪ್ರಕರಣಗಳು | ವಿಧಿಸಿರುವ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿದ ಮೊಕದ್ದಮೆ ಗಳು |
| 2020-21 | 293 | 82.55 | 72 | 2866 | 506.41 | 929 | 288 | 136.35 | 127 |
| 2021-22 | 326 | 113.93 | 84 | 2949 | 608.74 | 971 | 261 | 183.58 | 134 |
| 2022-23 | 239 | 92.43 | 63 | 2864 | 623.86 | 741 | 303 | 82.12 | 160 |
| ಒಟ್ಟು | 858 | 288.91 | 219 | 8679 | 1739.01 | 2641 | 852 | 402.05 | 421 |

CI-MMN-44-2024.

Deputy Director (Min. Adm.)
Dept. of Mines & Geology
Bangalore-560001